# ಕರ್ನಾಟಕ ಸರ್ಕಾರದ ನಡವಳಿಗಳು

Christian Dept

ವಿಷಯ: ಕ್ರಿಶ್ಚಿಯನ್ ಸಮುದಾಯದ ಅಭಿವೃದ್ಧಿಗಾಗಿ 2011-12ನೇ ಸಾಲಿನಲ್ಲಿ ಯೋಜನೆಗಳನ್ನು ಅನುಷ್ಠಾನಗೊಳಿಸಲು ರೂ.50.00ಕೋಟಿಗಳಿಗೆ ಅನುಮೋದನೆ ನೀಡುವ ಬಗ್ಗೆ:-

ಓದಲಾಗಿದೆ: 1) ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ದಿ: 18-04-2011ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿಗಳು.

## ಪ್ರಸ್ತಾವನೆ

ರಾಜ್ಯದಲ್ಲಿನ ಕ್ರಿಶ್ಚಿಯನ್ ಸಮುದಾಯದ ಸಮಗ್ರ ಅಭಿವೃದ್ಧಿಗಾಗಿ 2011-12ನೇ ಸಾಲಿನಲ್ಲಿ ಅಭಿವೃದ್ಧಿ ಯೋಜನೆಗಳನ್ನು ಹಮ್ಮಿಕೊಳ್ಳಲು ರೂ.50.00ಕೋಟಿ ಅನುದಾನವನ್ನು ಒದಗಿಸಲಾಗುವುದೆಂದು ಮಾನ್ಯ ಮುಖ್ಯಮಂತ್ರಿಯವರು 2011-12ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿದ್ದರು. ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ದಿನಾಂಕ:18/04/2011ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯಲ್ಲಿ ರಾಜ್ಯದಲ್ಲಿರುವ ಕ್ರಿಶ್ಚಿಯನ್ ಸಮುದಾಯದ ಸಮಗ್ರ ಅಭಿವೃದ್ಧಿಗಾಗಿ ಯೋಜನೆಗಳನ್ನು ಹಮ್ಮಿಕೊಳ್ಳುವ ಕುರಿತು ಕೂಲಂಕಷವಾಗಿ ಚರ್ಚಿಸಿ ನಿರ್ಣಯಗಳನ್ನು ಕೈಗೊಳ್ಳಲಾಗಿರುತ್ತದೆ.

ಕ್ರಿಶ್ಚಿಯನ್ ಸಮುದಾಯದ ಅಭಿವೃದ್ಧಿಗಾಗಿ ಸಮುದಾಯ ಭವನಗಳ ನಿರ್ಮಾಣ, ವೃತ್ತಿಪರ ವಿದ್ಯಾಭ್ಯಾಸಕ್ಕಾಗಿ ರೂ.5000ಗಳಿಂದ ಗರಿಷ್ಟ ರೂ.50.000ಗಳವರೆಗೆ ಸಾಲ ಸೌಲಭ್ಯಗಳನ್ನು ಶೇಕಡಾ ರೂ.2%ರ ಬಡ್ಡಿ ದರದಲ್ಲಿ ನೀಡಲು,ಗ್ರಾಮೀಣ ಕುಶಲ ಕರ್ಮಿಗಳು,ವೃತ್ತಿ ಕುಲಕಸುಬುದಾರರ ಕುಶಲತೆ ಮತ್ತು ತಂತ್ರಜ್ಞಾನ ಉತ್ತಮ ಪಡಿಸಲು ತರಬೇತಿ, ಸ್ವಂತ ಉದ್ಯಮಿಯಾಗಲು ಶೇಕಡಾ 4%ರ ಬಡ್ಡಿದರದಲ್ಲಿ ಸಾಲ.- ನಗರಪ್ರದೇಶ, ಗ್ರಾಮಗಳಲ್ಲಿ ವಾಸಿಸುವ ಅನಕ್ಷರಸ್ಥ ಕ್ರಿಶ್ಚಿಯನ್ ಮಹಿಳೆಯರಿಗೆ ತಳ್ಳುವ ಗಾಡಿಯಲ್ಲಿ, ತರಕಾರಿ ಹಣ್ಣು ಮಾರಾಟ, ಹಾಸಿಗೆ ತಯಾರಿಕೆ ಇತ್ಯಾದಿ ಕೆಲಸಗಳಿಗಾಗಿ ಶೇಕಡ 5% ಬಡ್ಡಿ ದರದಲ್ಲಿ ರೂ.10.000 ಸಾಲ.(75% ಸಾಲ ಹಾಗೂ 25%ಸಬ್ಸಿಡಿ)ಕೌಶಲ್ಯ ಅಭಿವೃದ್ಧಿ ಯೋಜನೆಯಡಿ ನಿರುದ್ಯೋಗ ನಿವಾರಣೆ ಮತ್ತು ಆರ್ಥಿಕ ಸ್ವಾವಲಂಬನೆಗಾಗಿ ನರ್ಸಿಂಗ್, ಕಂಪ್ಯೂಟರ್ ತರಬೇತಿ CIPET ಮೈಸೂರು ಇವರಿಂದ ವಿವಿಧ ತರಬೇತಿ,ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ ಇವರಿಂದ ಬ್ಯಾಂಕಿಂಗ್,ಫೈನಾನ್ಸಿಯಲ್ ಸರ್ವಿಸ್ ಮುಂತಾದ ತರಬೇತಿ. ಕ್ರಿಶ್ಚಿಯನ್ ಸಮುದಾಯದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ, ಚರ್ಚುಗಳ ದುರಸ್ಥಿ ಮತ್ತು ನವೀಕರಣಕ್ಕಾಗಿ ಅನುದಾನ, ಅನಾಥಾಶ್ರಮ ಮತ್ತು ವೃದ್ಧಾಶ್ರಮಗಳಿಗೆ ಮೂಲ ಸೌಕರ್ಯಗಳನ್ನು ಒದಗಿಸಲು ಅನುದಾನ, ಮನೆ ಕಟ್ಟಲು ಸಾಲ ಹಾಗೂ ಬಡ್ಡಿಯಲ್ಲಿ ರಿಯಾಯಿತಿ ಮುಂತಾದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಪ್ರಸ್ತಾಪಿಸಲಾಗಿದೆ.

ಅಲ್ಲದೆ, ಚರ್ಚುಗಳ ದುರಸ್ಥಿ ಮತ್ತು ನವೀಕರಣ ಕಾಮಾಗಾರಿಗಾಗಿ ಅನುದಾನವನ್ನು ಒದಗಿಸುವ ಬಗೆಗಿನ ಕಾರ್ಯಕ್ರಮದ ಮೇಲುಸ್ತುವಾರಿ ಸಲುವಾಗಿ ಒಂದು ಕ್ರಿಶ್ಚಿಯನ್ ಅಭಿವೃದ್ಧಿ ಪರಿಷತ್ತನ್ನು ರಚಿಸಲು ಪ್ರಸ್ತಾಪಿಸಲಾಗಿದೆ.

ಈ ಪ್ರಸ್ತಾವನೆಗಳನ್ನು ಪರಿಶೀಲಿಸಿ ಈ ಕೆಳಕಂಡ ಆದೇಶ.

28.x.11 MDIC Dr. ... to f guideline 28/x/11

AA

## ಸರ್ಕಾರದ ಅದೇಶ ಸಂಖ್ಯೆ: ಆಸಂಕಇ 70 ಎಂಡಿಎಸ್ 2011, ಬೆಂಗಳೂರು, ದಿನಾಂಕ: 19/09/2011.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯದಲ್ಲಿನ ಕ್ರಿಶ್ಚಿಯನ್ ಸಮುದಾಯದ ಸಮಗ್ರ ಅಭಿವೃದ್ಧಿಗಾಗಿ, ಸಮುದಾಯ ಭವನಗಳ ನಿರ್ಮಾಣ, ಚರ್ಚುಗಳ ದುರಸ್ತಿ ಮತ್ತು ನವೀಕರಣ ಮುಂತಾದ ಈ ಯೋಜನೆಗಳನ್ನು (ಅನುಬಂಧ-1ರಲ್ಲಿ ನಮೂದಿಸಿರುವ) ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ

---2